ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್5/98/2022-23

ದಿನಾಂಕ 30.10.2023

## ಸು ತ್ತೋ ಲೆ

ವಿಷಯ: ದಿನಾಂಕ 01.11.2023ರಂದು "ಕನ್ನಡ ರಾಜ್ಯೋತ್ಸವ ದಿನಾಚರಣೆ"ಗೆ ವಿಶ್ವವಿದ್ಯಾನಿಲಯದ ಅಧ್ಯಾಪಕ/ಅಧ್ಯಾಪಕೇತರ ಉದ್ಯೋಗಿಗಳು ಕಡ್ಡಾಯವಾಗಿ ಭಾಗವಹಿಸುವ ಬಗ್ಗೆ.

ಉಲ್ಲೇಖ:1 ಜಿಲ್ಲಾಧಿಕಾರಿಗಳ ಪರವಾಗಿ, ಜಿಲ್ಲಾದಿಕಾರಿಗಳ ಕಾರ್ಯಾಲಯ, ಮೈಸೂರು ಜಿಲ್ಲೆ, ಮೈಸೂರು ಇವರ ಪತ್ರ ಸಂಖ್ಯೆ:ಸಂ.ಎನ್.ಎಫ್.ಸಿ/ಕ.ರಾ/2023, ದಿನಾಂಕ: 27.10.2023 ಮತ್ತು 30.10.2023

2. ಜಿಲ್ಲಾ ರಾಷ್ಟ್ರೀಯ ಹಬ್ಬಗಳ ಸಮಿತಿ ಸಭೆ ನಡಾವಳಿ ದಿನಾಂಕ: 26.10.2023

*****

ಉಲ್ಲೇಖ(1)ರ ಸುತ್ತೋಲೆಯನ್ವಯ ದಿನಾಂಕ:01.11.2023ರಂದು **ಓವೆಲ್ ಮೈದಾನದಲ್ಲಿ ಕನ್ನಡ ರಾಜ್ಯೋತ್ಸವ ಸಮಾರಂಭವನ್ನು** ಆಚರಿಸಲಾಗುತ್ತಿದ್ದು, ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಅಂದು ಬೆಳಗ್ಗೆ 9.00ಗಂಟೆಗೆ ಧ್ವಜಾರೋಹಣ ನೆರವೇರಿಸುವರು ಆದ್ದರಿಂದ, ವಿಶ್ವವಿದ್ಯಾನಿಲಯದ ಎಲ್ಲಾ ಅಧ್ಯಾಪಕ/ಅಧ್ಯಾಪಕೇತರ ಉದ್ಯೋಗಿಗಳು(ತಾತ್ಕಾಲಿಕ ನೌಕರರು, ಅತಿಥಿ ಉಪನ್ಯಾಸಕರು ಒಳಗೊಂಡಂತೆ) ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ಹಾಗೂ ಈ ಕೆಳಕಂಡ ಅಂಶಗಳನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಈ ಮೂಲಕ ತಿಳಿಸಲಾಗಿದೆ.

1. ನವೆಂಬರ್ 1 ರಂದು ರಾಜ್ಯದ ಎಲ್ಲಾ ಮನೆಗಳ ಮುಂದೆ ಕೆಂಪು ಮತ್ತು ಹಳದಿ ಬಣ್ಣದ ರಂಗೋಲಿಗಳನ್ನು ಬಿಡಿಸಿ ಕರ್ನಾಟಕ ಸಂಭ್ರಮ-50 "ಹೆಸರಾಯಿತು ಕರ್ನಾಟಕ, ಉಸಿರಾಗಲಿ ಕನ್ನಡ"ಎಂಬ ಘೋಷ ವಾಕ್ಯವನ್ನು ಬರೆಯುವುದು.
2. ನವೆಂಬರ್ 1 ರ ಬೆಳಗ್ಗೆ 9.00 ಗಂಟೆಗೆ ಎಲ್ಲಾ ಆಕಾಶವಾಣಿ ಕೇಂದ್ರಗಳಲ್ಲಿ (ರೇಡಿಯೋ) ನಾಡ ಗೀತೆಯನ್ನು ಪ್ರಸಾರ ಮಾಡಲಾಗುವುದು, ಆ ಸಮಯದಲ್ಲಿ ಕನ್ನಡ ನಾಡಿನ ಸಮಸ್ತ ನಾಗರಿಕರು ಎದ್ದು ನಿಂತು ರಾಷ್ಟ್ರ ಗೀತೆಗೆ ಗೌರವ ಸಲ್ಲಿಸುವ ರೀತಿಯಲ್ಲಿ ನಾಡ ಗೀತೆಗೂ ಗೌರವ ಸಲ್ಲಿಸುವುದು.
3. ನವೆಂಬರ್ 1 ರ ಸಂಜೆ5.00 ಗಂಟೆಗೆ ಜಿಲ್ಲೆಯ ಎಲ್ಲಾ ಗ್ರಾಮಗಳ ಮೈದಾನಗಳಲ್ಲಿ ಕೆಂಪು ಹಳದಿ ಬಣ್ಣದ ಗಾಳಿಪಟಗಳನ್ನು ಆಕಾಶಕ್ಕೆ ಹಾರಿ ಬಿಡುವ ಮೂಲಕ ಸುವರ್ಣ ಸಂಭ್ರಮ ಗಾಳಿಪಟ ಉತ್ಸವ ಆಚರಿಸುವುದು.

ಸೂಚನೆ: ಸದರಿ ಕಾರ್ಯಕ್ರಮದ ಹಾಜರಾತಿ ಕಡ್ಡಾಯವಾಗಿದ್ದು, ಹಾಜರಾತಿಯನ್ನು ವಿಭಾಗ/ಕಛೇರಿಯ ಮುಖ್ಯಸ್ಥರು ಹಾಜರಾತಿಯನ್ನು ಪಡೆದುಕೊಂಡು ಉಪಕುಲಸಚಿವ(ಸಾಮಾನ್ಯ), ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರಿಗೆ ಸಲ್ಲಿಸುವುದು.

30/10/2023

ಕುಲಸಚಿವ

ಇವರಿಗೆ,

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾ.ಗಂ.,ಮೈಸೂರು
2. ಎಲ್ಲಾ ಅಂಗ ಸಂಸ್ಥೆಗಳ ನಿರ್ದೇಶಕರು/ಸಂಯೋಜನಾಧಿಕಾರಿಗಳು ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು
3. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರು, ಮೈವಿವಿ,ಮೈಸೂರು
4. ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
5. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು
6. ನಿರ್ದೇಶಕರು, ಐ.ಸಿ.ಡಿ, ಗಣಕ ವಿಜ್ಞಾನ, ಮಾನಸಗಂಗೋತ್ರಿ, ಮೈಸೂರು -ಸದರಿ ಪತ್ರವನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
7. ಮಾನ್ಯ ಕುಲಪತಿ /ಕುಲಸಚಿವ /ಕುಲಸಚಿವ (ಪರೀಕ್ಷಾಂಗ) /ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು
8. ಕಛೇರಿ ಪ್ರತಿ.